# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 631 (733) |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಕೆ.ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 10.03.2026 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಳೆದ ಮೂರು ವರ್ಷಗಳಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಮೂಲಕ ಸೃಷ್ಟಿಯಾದ ನೇರ ಮತ್ತು ಪರೋಕ್ಷ ಉದ್ಯೋಗಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು); | ಕಳೆದ 03 ವರ್ಷಗಳಲ್ಲಿ (2022-23 ರಿಂದ ಫೆಬ್ರುವರಿ 2026ರ ಅಂತ್ಯದವರೆಗೆ) ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಗಳಲ್ಲಿ ಒಟ್ಟು 2028 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಇವುಗಳಿಂದ ರೂ.511732.88 ಕೋಟಿ ಬಂಡವಾಳ ಹೂಡಿಕೆ ಮತ್ತು 716148 ಉದ್ಯೋಗಾವಕಾಶ ನಿರೀಕ್ಷಿಸಲಾಗಿದೆ. ಈ ಯೋಜನೆಗಳ ಪೈಕಿ 81 ಯೋಜನೆಗಳು ಅನುಷ್ಠಾನಗೊಂಡಿದ್ದು, ರೂ.69564.20 ಕೋಟಿ ಬಂಡವಾಳ ಹೂಡಿಕೆಯಾಗಿದೆ ಮತ್ತು 106225 ಉದ್ಯೋಗಾವಕಾಶ ಸೃಜನೆಯಾಗಿರುತ್ತವೆ. ಉಳಿದ ಯೋಜನೆಗಳು ವಿವಿಧ ಅನುಷ್ಠಾನ ಹಂತಗಳಲ್ಲಿರುತ್ತವೆ. ಇವುಗಳಲ್ಲಿ ಬಹುತೇಕ ಮಧ್ಯಮ, ಬೃಹತ್ ಹಾಗೂ ಮೆಗಾ ಯೋಜನೆಗಳಾಗಿದ್ದು, ಅನುಷ್ಠಾನಕ್ಕೆ 3-5 ವರ್ಷಗಳ ಕಾಲಾವಧಿ ಬೇಕಾಗಿರುತ್ತದೆ. |
| ಆ | ಗ್ರಾಮೀಣ ಪ್ರದೇಶದ ಸ್ಥಳೀಯ ಯುವಕರಿಗೆ ಯಾವ-ಯಾವ ರೀತಿಯ ಉದ್ಯೋಗಾವಕಾಶಗಳನ್ನು ನೀಡಲಾಗುತ್ತಿದೆ; ಆದರ ಪ್ರಮಾಣ ಎಷ್ಟು; | ಗ್ರಾಮೀಣ ಪ್ರದೇಶದ ಸ್ಥಳೀಯ ಯುವಕರಿಗೆ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನಾ ಯೋಜನೆಯು (ಪಿ.ಎಂ.ಇ.ಜಿ.ಪಿ) 2008-09ನೇ ಸಾಲಿನಿಂದ ಜಾರಿಯಲ್ಲಿರುತ್ತದೆ. ಈ ಯೋಜನೆಯನ್ನು ಖಾದಿ ಮತ್ತು ಗ್ರಾಮೋದ್ಯೋಗ ಆಯೋಗ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮತ್ತು ಜಿಲ್ಲಾ ಕೈಗಾರಿಕಾ ಕೇಂದ್ರಗಳ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ.<br><br>ಸದರಿ ಯೋಜನೆಯಡಿ ನಿರುದ್ಯೋಗಿಗಳಿಗೆ ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು, ಉದ್ಯೋಗಾವಕಾಶ ಕಲ್ಪಿಸುವ ದೃಷ್ಟಿಯಿಂದ, ಉತ್ಪಾದನೆ ಚಟುವಟಿಕೆಗೆ ರೂ.50.00 ಲಕ್ಷಗಳ ಯೋಜನಾ ವೆಚ್ಚದವರೆಗೂ ಮತ್ತು ಸೇವಾ ಚಟುವಟಿಕೆಗೆ ರೂ.20.00 ಲಕ್ಷಗಳ ಯೋಜನಾ ವೆಚ್ಚದವರೆಗೂ ಬ್ಯಾಂಕ್ ಮುಖಾಂತರ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ. ಕೇಂದ್ರ ಸರ್ಕಾರದಿಂದ ಈ ಕೆಳಗಿನಂತೆ ಸಹಾಯಧನವನ್ನು ನೀಡಲಾಗುತ್ತದೆ.<br><br>ವರ್ಗ / ನಗರ / ಗ್ರಾಮೀಣ:<br>ಸಾಮಾನ್ಯ ವರ್ಗದವರಿಗೆ — 15% — 25%<br>ಪ.ಜಾ, ಪ.ಪಂ, ಹಿಂದುಳಿದ ವರ್ಗ, ಅಲ್ಪ ಸಂಖ್ಯಾತ, ಮಾಜಿ ಸೈನಿಕ, ಅಂಗವಿಕಲ, ಮಹಿಳೆ — 25% — 35%<br><br>ಯೋಜನೆಯಡಿಯಲ್ಲಿನ ಫಲಾನುಭವಿಗಳಿಗೆ ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ ತರಬೇತಿಯನ್ನು ನೀಡಲಾಗುವುದು ಹಾಗೂ ಮಾರುಕಟ್ಟೆ ಸೌಲಭ್ಯವನ್ನು ಒದಗಿಸಲು ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗುತ್ತದೆ. |

| | | |
|---|---|---|
| ಇ | ಮಹಿಳೆಯರು ಮತ್ತು ಎಸ್‌ಸಿ/ಎಸ್‌ಟಿ ಸಮುದಾಯಗಳಿಗೆ ಕೈಗಾರಿಕಾ ಉದ್ಯೋಗದಲ್ಲಿ ಯಾವ-ಯಾವ ರೀತಿಯ ಪ್ರಾತಿನಿಧ್ಯ ನೀಡಲಾಗುತ್ತಿದೆ; | ಬೃಹತ್ ಮತ್ತು ಮೆಗಾ ಹಾಗೂ ಅಲ್ಟ್ರಾ ಮೆಗಾ ಕೈಗಾರಿಕೆಗಳಲ್ಲಿ ಮಹಿಳೆಯರ ಸೇರ್ಪಡೆಯು ಕರ್ನಾಟಕದ ಕೈಗಾರಿಕಾ ನೀತಿಯ ಮಹತ್ವದ ಅಂಶವಾಗಿದ್ದು, ಆರ್ಥಿಕ ಬೆಳವಣಿಗೆಗೆ ಚಾಲನೆ ನೀಡಲು ಮತ್ತು ನವೋನ್ವೇಷಣೆಗೆ ತನ್ನ ಸಂಪೂರ್ಣ ಮಾನವ ಸಂಪನ್ಮೂಲದ ಬಳಕೆ ಮಾಡುವ ಗುರಿ ಹೊಂದಿದೆ.<br>ಕೈಗಾರಿಕಾ ನೀತಿ 2025-30 ರಡಿ ಮಹಿಳೆಯರಿಗೆ ಹೆಚ್ಚಿನ ಉದ್ಯೋಗ ಕಲ್ಪಿಸುವ ಕೈಗಾರಿಕೆಗಳಿಗೆ ಹೆಚ್ಚುವರಿ ಸಹಾಯಧನವನ್ನು ನೀಡಲು ಅವಕಾಶ ಕಲ್ಪಿಸಲಾಗಿದೆ.<br>ಮುಂದುವರೆದು, SC/ST ಸಮುದಾಯಗಳಿಗೆ ಸರ್ಕಾರಿ ಸ್ವಾಮ್ಯದ ಕಂಪನಿಗಳಲ್ಲಿ ಮೀಸಲಾತಿ ನಿಯಮದನ್ವಯ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ. |

ಸಿಐ 39 ಎಸ್‌ಪಿಐ 2026

(ಎಂ.ಬಿ. ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು